# All India Radio: Bangalore
# National Bulletin In Kannada
## 27.07.2026  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.07.2026  07.35 a.m.**

**<><><><>**

ಮುಖ್ಯಾಂಶಗಳು

1. ಲೋಕಸಭೆಯಲ್ಲಿಂದು ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬ ಮಂಡನೆ
2. ಪರೀಕ್ಷಾ ವ್ಯವಸ್ಥೆ ಸುಧಾರಣೆಗೆ ನಂದನ್ ನೀಲೇಕಣಿ ನೇತೃತ್ವದಲ್ಲಿ ಉನ್ನತ ಮಟ್ಟದ ಕಾರ್ಯಪಡೆ
3. ಕಾಮನ್‌ವೆಲ್ತ್ ಕ್ರೀಡಾಕೂಟ ; ಮಹಿಳೆಯರ ೪೮ ಕೆಜಿ ವೇಟ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಭಾರತದ ಮೀರಾಬಾಯಿ ಚಾನುಗೆ ಸ್ವರ್ಣ
4. ಟಿ-೨೦ ಕ್ರಿಕೆಟ್: ಜಿಂಬಾಬ್ವೆ ವಿರುದ್ಧ ೩-೦ ಅಂತರದಿಂದ ಸರಣಿ ವಶಪಡಿಸಿಕೊಂಡ ಭಾರತ

<><><><>

ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬ ಅನ್ನು ಲೋಕಸಭೆಯಲ್ಲಿ ಇಂದು ಕೇಂದ್ರ ಸರ್ಕಾರ ಮಂಡಿಸಲಿದೆ. ೨೦೨೪ರ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ಕಾಯ್ದೆಗೆ ತಿದ್ದುಪಡಿ ತರಲು ಈ ಮಸೂದೆ ಉದ್ದೇಶಿಸಿದ್ದು, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಮಸೂದೆಯನ್ನು ಮಂಡಿಸಲಿದ್ದಾರೆ. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮ ಪ್ರಕರಣಗಳಲ್ಲಿ ತ್ವರಿತ ನ್ಯಾಯಾಲಯಗಳ ಸ್ಥಾಪನೆ ಮತ್ತು ಕಠಿಣ ಶಿಕ್ಷೆ ವಿಧಿಸುವ ಸಂಬಂಧದ ಕರಡು ಮಸೂದೆಗೆ ಕೇಂದ್ರ ಸಚಿವ ಸಂಪುಟ ಶುಕ್ರವಾರ ಅನುಮೋದನೆ ನೀಡಿತ್ತು.

<><><><>

ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ ತರಲು ತಂತ್ರಜ್ಞಾನ ತಜ್ಞ ನಂದನ್ ನೀಲೇಕಣಿ ನೇತೃತ್ವದಲ್ಲಿ ಉನ್ನತ ಮಟ್ಟದ ಕಾರ್ಯಪಡೆ ರಚಿಸಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಘೋಷಿಸಿದ್ದಾರೆ. ವಿಡಿಯೊ ಸಂದೇಶದಲ್ಲಿ ಮಾತನಾಡಿದ ಪ್ರಧಾನಮಂತ್ರಿ, ಪರೀಕ್ಷಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವತ್ತ ಕಾರ್ಯಪಡೆ ಗಮನಹರಿಸಲಿದ್ದು, ಅದರ ಶಿಫಾರಸುಗಳ ಆಧಾರದ ಮೇಲೆ ಮುಂದಿನ ಪರೀಕ್ಷೆಗಳ ವಿಶ್ವಾಸಾರ್ಹತೆಯನ್ನು ಖಾತ್ರಿಪಡಿಸಲು ಶೀಘ್ರವೇ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು. ದೇಶದ ಪರೀಕ್ಷಾ ವ್ಯವಸ್ಥೆ ವಿಶ್ವಾಸಾರ್ಹ, ಪಾರದರ್ಶಕ ಹಾಗೂ ತಂತ್ರಜ್ಞಾನದ ಗರಿಷ್ಠ ಬಳಕೆಯನ್ನು ಒಳಗೊಂಡಿರಬೇಕು ಎಂದರು. ಕಾರ್ಯಪಡೆಯಲ್ಲಿ ಗುಪ್ತಚರ ದಳದ ಮಾಜಿ ನಿರ್ದೇಶಕ ತಪನ್ ಡೇಕಾ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಮಾಜಿ ಅಧ್ಯಕ್ಷ ಎಸ್. ಸೋಮನಾಥ್, ಐಐಟಿ ಚೆನ್ನೈನ ನಿರ್ದೇಶಕ

ವಿ.ಕಾಮಕೋಟಿ, ಮಾಜಿ ಶಿಕ್ಷಣ ಕಾರ್ಯದರ್ಶಿ ಅನಿತಾ ಕರ್ವಾಲ್ ಹಾಗೂ ವ್ಯವಸ್ಥಾಪನಾ ತಜ್ಞ ಅಮೃತ್ ಲಾಲ್ ಮೀನಾ ಸದಸ್ಯರಾಗಿದ್ದಾರೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ಕಠಿಣ ಕಾನೂನು ನಿಯಮಗಳನ್ನು ಒಳಗೊಂಡ ಹೊಸ ಮಸೂದೆಯನ್ನು ಇಂದು ಸಂಸತ್ತಿನಲ್ಲಿ ಮಂಡಿಸಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಗಳ ಪಾವಿತ್ರ್ಯ ಕಾಪಾಡುವುದು ಹಾಗೂ ಕೋಟ್ಯಂತರ ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಅವರು ಪ್ರಧಾನಮಂತ್ರಿ ಪುನರುಚ್ಚರಿಸಿದರು.

<><><>

ಹೊಸ ತಲೆಮಾರಿನ ಭವಿಷ್ಯವನ್ನು ರಕ್ಷಿಸಲು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ನಿರಂತರ ಸುಧಾರಣೆಯ ತತ್ವವನ್ನು ಅನುಸರಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ನಂದನ್ ನೀಲೇಕಣಿ ನೇತೃತ್ವದ ಕಾರ್ಯಪಡೆ ದೇಶದ ಪರೀಕ್ಷಾ ವ್ಯವಸ್ಥೆಯ ಪಾವಿತ್ರ್ಯಕ್ಕೆ ಧಕ್ಕೆ ಉಂಟಾಗದಂತೆ ನೋಡಿಕೊಳ್ಳಲಿದೆ ಎಂದು ತಿಳಿಸಿದ್ದಾರೆ. ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಲಾಗುತ್ತಿದ್ದು, ಹಾಗೂ ಇಂತಹ ಅಪರಾಧ ಎಸಗಲು ಯಾರೂ ಧೈರ್ಯ ಮಾಡದಂತೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಅಮಿತ್ ಶಾ ಹೇಳಿದ್ದಾರೆ.

<><><>

ವಿಕಸಿತ ಭಾರತ ನಿರ್ಮಿಸುವಲ್ಲಿ ದೇಶದ ಯುವಕರು ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಯುವಕರು ಅಭಿವೃದ್ಧಿ ಹೊಂದಿದ ಭಾರತದ ಹಿಂದಿನ ಪ್ರೇರಕ ಶಕ್ತಿ ಮಾತ್ರವಲ್ಲದೆ, ಅದರ ಅತಿದೊಡ್ಡ ಫಲಾನುಭವಿಗಳು ಕೂಡ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿಕಸಿತ ವೈಬ್ರಂಟ್ ವಿಲೇಜ್ ಪ್ರೋಗ್ರಾಂ ೨೦೨೬ ರಲ್ಲಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ  ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೪೦೦ ಕ್ಕೂ ಹೆಚ್ಚು ಯುವ ಪ್ರತಿನಿಧಿಗಳೊಂದಿಗೆ ಪ್ರಧಾನಿ ಸಂವಾದ ನಡೆಸಿದರು. ಅಭಿವೃದ್ಧಿ ಪ್ರಕ್ರಿಯೆಯಿಂದ ಹೊರಗುಳಿದವರಿಗೆ ಆದ್ಯತೆ ನೀಡಲು ಮತ್ತು ಸಬಲೀಕರಣಗೊಳಿಸಲು ಸರ್ಕಾರ, ಸಂಘಟಿತ ಪ್ರಯತ್ನಗಳನ್ನು ಮಾಡುತ್ತಿದೆ. ಈ ಕಾರ್ಯಕ್ರಮದಲ್ಲಿ ಯುವತಿಯರ ಭಾಗವಹಿಸುವಿಕೆಯು ಭಾರತದ ಹೆಣ್ಣುಮಕ್ಕಳ ಆತ್ಮವಿಶ್ವಾಸ ಮತ್ತು ಧೈರ್ಯವನ್ನು ಪ್ರತಿಬಿಂಬಿಸುತ್ತದೆ. ಪ್ರತಿಯೊಬ್ಬ ಯುವ ವ್ಯಕ್ತಿ, ವಿಶೇಷವಾಗಿ ದೇಶದ ಪ್ರತಿಯೊಬ್ಬ ಹೆಣ್ಣುಮಗಳು, ಆತ್ಮವಿಶ್ವಾಸ ಮತ್ತು ದೃಢನಿಶ್ಚಯದಿಂದ ಮುಂದುವರಿಯುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು.

<><><>

ಪಾಕಿಸ್ತಾನದೊಂದಿಗೆ ಯಾವುದೇ ಮಾತುಕತೆ ನಡೆದರೂ ಅದು ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರ ಕುರಿತಾಗಿ ಮಾತ್ರ ನಡೆಯಲಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪುನರುಚ್ಚರಿಸಿದ್ದಾರೆ. ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರವು ಭಾರತದ ಅವಿಭಾಜ್ಯ ಅಂಗವಾಗಿದ್ದು, ಅದನ್ನು ಪಾಕಿಸ್ತಾನ

ಅಕ್ರಮವಾಗಿ ಆಕ್ರಮಿಸಿಕೊಂಡಿದೆ ಎಂದು ಅವರು ಹೇಳಿದ್ದಾರೆ. ಲಡಾಖ್‌ನ ದ್ರಾಸ್‌ನಲ್ಲಿ ನಡೆದ ೨೬ನೇ ಕಾರ್ಗಿಲ್ ವಿಜಯ್ ದಿವಸ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದ ಸಾರ್ವಭೌಮತ್ವದ ವಿರುದ್ಧದ ಯಾವುದೇ ದುಷ್ಕೃತ್ಯಕ್ಕೂ, ಆಪರೇಷನ್ ಸಿಂಧೂರ್ ಮೂಲಕ ಉಗ್ರರು ಹಾಗೂ ಅವರ ಬೆಂಬಲಿಗರಿಗೆ ಭಾರತೀಯ ಸಶಸ್ತ್ರ ಪಡೆಗಳು ನೀಡಿದಂತೆಯೇ ದೃಢ ಮತ್ತು ತಕ್ಕ ಉತ್ತರ ನೀಡಲಾಗುವುದು ಎಂದು ಹೇಳಿದರು. ಆಪರೇಷನ್ ಸಿಂಧೂರ್‌ನ ಯಶಸ್ಸು, ಪಾಕಿಸ್ತಾನದ ಯಾವುದೇ ದುಸ್ಸಾಹಸಕ್ಕೆ ಅದರ ಕಲ್ಪನೆಗೂ ಮೀರಿದ ರೀತಿಯಲ್ಲಿ ಪ್ರತಿಕ್ರಿಯಿಸುವ ಸಾಮರ್ಥ್ಯ ಭಾರತಕ್ಕಿದೆ ಎಂಬುದನ್ನು ಸಾಬೀತುಪಡಿಸಿದೆ ಎಂದರು. ಭಾರತ ನಾವೀನ್ಯತೆ, ಚಿಪ್ ವಿನ್ಯಾಸ ಹಾಗೂ ಅರೆವಾಹಕ ಉತ್ಪಾದನೆಯಲ್ಲಿ ಹೊಸ ಮೈಲಿಗಲ್ಲುಗಳನ್ನು ಸಾಧಿಸುತ್ತಿದ್ದರೆ, ಪಾಕಿಸ್ತಾನ ಒಳನುಸುಳುವಿಕೆ, ಭಯೋತ್ಪಾದನೆ ಮತ್ತು ಆತ್ಮಾಹುತಿ ದಾಳಿಕೋರರನ್ನು ಸೃಷ್ಟಿಸುವುದರಲ್ಲಿ ತೊಡಗಿದೆ ಎಂದು ಸಚಿವ ರಾಜನಾಥ್ ಸಿಂಗ್ ದೂರಿದರು.

<><><><>

ವಿದೇಶಿ ಹೂಡಿಕೆದಾರರು ಜುಲೈ ತಿಂಗಳಲ್ಲಿ ಭಾರತೀಯ ಷೇರು ಮಾರುಕಟ್ಟೆಯಲ್ಲಿ ನಿವ್ವಳ ಖರೀದಿದಾರರಾಗಿ ಹೊರಹೊಮ್ಮಿದ್ದು, ಇದುವರೆಗೆ ೧೪ ಸಾವಿರ ೯೪೬ ಕೋಟಿ ರೂಪಾಯಿ ಮೌಲ್ಯದ ಷೇರುಗಳನ್ನು ಖರೀದಿಸಿದ್ದಾರೆ. ಇತ್ತೀಚಿನ ಅಂಕಿ-ಅಂಶಗಳ ಪ್ರಕಾರ, ಕಳೆದ ವಾರವೊಂದರಲ್ಲೇ ವಿದೇಶಿ ಹೂಡಿಕೆದಾರರು ದೇಶೀಯ ಷೇರು ಮಾರುಕಟ್ಟೆಗೆ ೩ ಸಾವಿರ ೪೯ ಕೋಟಿ ರೂಪಾಯಿ ಹೂಡಿಕೆ ಮಾಡಿದ್ದಾರೆ. ಇದೇ ವೇಳೆ, ಭಾರತದ ಸಾಲ ಭದ್ರತೆ ಮಾರುಕಟ್ಟೆಯಲ್ಲೂ ವಿದೇಶಿ ಹೂಡಿಕೆದಾರರ ಆಸಕ್ತಿ ಮುಂದುವರಿದಿದೆ. ಜುಲೈ ತಿಂಗಳಲ್ಲಿ ಸಂಪೂರ್ಣ ಪ್ರವೇಶ ಮಾರ್ಗದ ಮೂಲಕ ೯ ಸಾವಿರ ೫೨೧ ಕೋಟಿ ರೂಪಾಯಿ ಹಾಗೂ ಸಾಮಾನ್ಯ ಮಾರ್ಗದ ಮೂಲಕ ೨೬ ಸಾವಿರ ೩೯೧ ಕೋಟಿ ರೂಪಾಯಿ ಹೂಡಿಕೆ ಮಾಡಲಾಗಿದೆ.

<><><><>

ಭಾರತದ ವೇಟ್‌ಲಿಫ್ಟಿಂಗ್ ಚಾಂಪಿಯನ್ ಮೀರಾಬಾಯಿ ಚಾನು ೨೦೨೬ ರ ಗ್ಲಾಸ್ಗೋ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ದೇಶಕ್ಕೆ ಮೊದಲ ಚಿನ್ನದ ಪದಕ ಗೆದ್ದಿದ್ದಾರೆ. ಅವರು ಮಹಿಳೆಯರ ೪೮ ಕೆಜಿ ವೇಟ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಒಟ್ಟು ೧೯೦ ಕಿಲೋಗ್ರಾಂಗಳಷ್ಟು ಭಾರ ಎತ್ತುವ ಮೂಲಕ ಪ್ರಾಬಲ್ಯ ಸಾಧಿಸಿದ್ದಾರೆ. ಅವರು ಸ್ನ್ಯಾಚ್‌ನಲ್ಲಿ ೮೫ ಕಿಲೋಗ್ರಾಂ ಹಾಗೂ ಕ್ಲೀನ್ ಮತ್ತು ಜರ್ಕ್‌ನಲ್ಲಿ ೧೦೫ ಕಿಲೋಗ್ರಾಂಗಳಷ್ಟು ಭಾರ ಎತ್ತುವ ಮೂಲಕ ಕಾಮನ್‌ವೆಲ್ತ್ ಕ್ರೀಡಾಕೂಟದ ಹೊಸ ದಾಖಲೆ ಸ್ಥಾಪಿಸಿದ್ದಾರೆ. ೨೦೧೮ ಮತ್ತು ೨೦೨೨ ರ ನಂತರ, ಈ ವಿಜಯವು ಅವರಿಗೆ ಸತತ ಮೂರನೇ ಕಾಮನ್‌ವೆಲ್ತ್ ಕ್ರೀಡಾಕೂಟದ ಚಿನ್ನದ ಪದಕವನ್ನು ತಂದುಕೊಟ್ಟಿತು. ಮೀರಾಬಾಯಿ ಚಾನು ಅವರ ಈ ಸಾಧನೆಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ. ಪುರುಷರ ೬೦ ಕೆ.ಜಿ ವೈಟ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಭಾರತದ ರಿಷಿಕಾಂತ ಸಿಂಗ್ ಬೆಳ್ಳಿ ಗೆದ್ದಿದ್ದಾರೆ.

ಒಟ್ಟಾರೆ ೨೬೪ ಕೆ.ಜಿ ತೂಕ ಎತ್ತಿದ ರಿಷಿಕಾಂತ ಸಿಂಗ್, ಸ್ನಾಚ್‌ನಲ್ಲಿ ೧೨೧ ಕೆ.ಜಿ ಎತ್ತುವ ಮೂಲಕ ದಾಖಲೆ ನಿರ್ಮಿಸಿದರು. ಕ್ಲೀನ್ ಮತ್ತು ಜರ್ಕ್‌ನಲ್ಲಿ ೧೪೩ ಕಿಲೋಗ್ರಾಂ ಭಾರ ಎತ್ತಿದರು. ಪುರುಷರ ೬೫ ಕೆಜಿ ವಿಭಾಗದಲ್ಲಿ ರಾಜಾ ಮುತ್ತುಪಾಂಡಿ ಒಟ್ಟು ೨೮೬ ಕಿಲೋಗ್ರಾಂಗಳಷ್ಟು ಭಾರ ಎತ್ತುವ ಮೂಲಕ ಬೆಳ್ಳಿ ಪದಕ ಗೆದ್ದರು. ಈ ಪೈಕಿ ಸ್ನ್ಯಾಚ್‌ನಲ್ಲಿ ೧೨೬ ಕಿಲೋಗ್ರಾಂ ಹಾಗೂ ಕ್ಲೀನ್ ಮತ್ತು ಜರ್ಕ್‌ನಲ್ಲಿ ೧೬೦ ಕಿಲೋಗ್ರಾಂ ಸೇರಿವೆ. ಬಾಕ್ಸಿಂಗ್‌ನಲ್ಲಿ, ಪಾಕಿಸ್ತಾನದ ಸುಮಾಮಾ ರೆಹಮಾನ್ ಅವರನ್ನು ಸೋಲಿಸುವ ಮೂಲಕ ಜದುಮಣಿ ಸಿಂಗ್ ಪುರುಷರ ೫೫ ಕೆಜಿ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದರೆ, ಮಲಾವಿಯ ಡೆಬೊರಾ ಮೆಂಟೆಂಜೆ ವಿರುದ್ಧ ಜಯಗಳಿಸುವ ಮೂಲಕ ಪ್ರೀತಿ ಪವಾರ್ ಮಹಿಳೆಯರ ೫೪ ಕೆಜಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದರು. ಒಂದು ಚಿನ್ನ, ಎರಡು ಬೆಳ್ಳಿ ಮತ್ತು ಒಂದು ಕಂಚಿನೊಂದಿಗೆ ಭಾರತದ ಪದಕಗಳ ಸಂಖ್ಯೆ ಈಗ ನಾಲ್ಕಕ್ಕೆ ಏರಿಕೆಯಾಗಿದೆ. ಪ್ಯಾರಾ-ಪವರ್‌ಲಿಫ್ಟರ್ ಝುಂಡು ಕುಮಾರ್ ಸ್ಪರ್ಧೆಯ ಮೊದಲ ದಿನದಂದು ಪುರುಷರ ಹೆವಿವೇಯ್ಟ್ ಸ್ಪರ್ಧೆಯಲ್ಲಿ ಕಂಚಿನ ಪದಕ ಪಡೆದರು.

<><><><>

ಹರಾರೆಯಲ್ಲಿ ನಿನ್ನೆ ನಡೆದ ಜಿಂಬಾಬ್ವೆ ವಿರುದ್ಧದ ಮೂರನೇ ಹಾಗೂ ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಭಾರತ ೩೫ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಈ ಮೂಲಕ ಸರಣಿಯನ್ನು ೩-೦ ಅಂತರದಿಂದ ವಶಪಡಿಸಿಕೊಂಡಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೨ ರನ್ ಗಳಿಸಿತು. ಭಾರತದ ಪರ ವೈಭವ್ ಸೂರ್ಯವಂಶಿ ೪೯ ಎಸೆತಗಳಲ್ಲಿ ೮೧ ರನ್ ಸಿಡಿಸಿದರು. ಗೆಲುವಿನ ಗುರಿ ಬೆನ್ನತ್ತಿದ ಜಿಂಬಾಬ್ವೆ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೭ ರನ್ ಗಳಿಸಲಷ್ಟೇ ಶಕ್ತವಾಯಿತು. ಮಾಯಾಂಕ್ ಯಾದವ್ ಮೂರು ವಿಕೆಟ್ ಮತ್ತು ಯಶ್ ಠಾಕೂರ್ ಎರಡು ವಿಕೆಟ್ ಪಡೆದರು. ವೈಭವ್ ಸೂರ್ಯವಂಶಿ ಪಂದ್ಯ ಶ್ರೇಷ್ಠ ಮತ್ತು ಸರಣಿ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><><><>

ಹೋರ್ಮುಜ್ ಜಲಸಂಧಿಯಲ್ಲಿ ಸ್ಫೋಟಕ ಸಾಧನಕ್ಕೆ ಡಿಕ್ಕಿ ಹೊಡೆದ ಪರಿಣಾಮ ತೈಲ ಸಾಗಣೆ ಹಡಗಿನಲ್ಲಿ ಇಂದು ಸ್ಫೋಟ ಸಂಭವಿಸಿದೆ. ಇರಾನ್ ಅಧಿಕಾರಿಗಳು ನಿಗದಿಪಡಿಸಿದ್ದ ಸಮುದ್ರ ಮಾರ್ಗದಿಂದ ಹಡಗು ದಿಕ್ಕು ಬದಲಿಸಿದ್ದ ಹಿನ್ನೆಲೆಯಲ್ಲಿ ಈ ಘಟನೆ ಸಂಭವಿಸಿದೆ ಎಂದು ವರದಿಯಾಗಿದೆ.

<><><><>

ಫ್ರಾನ್ಸ್ ಮತ್ತು ಸ್ಪೇನ್‌ನಲ್ಲಿ ವ್ಯಾಪಕವಾಗಿ ಹರಡಿರುವ ಭಾರೀ ಕಾಡ್ಗಿಚ್ಚಿನ ಹಿನ್ನೆಲೆಯಲ್ಲಿ ಸುಮಾರು ೩ ಲಕ್ಷಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಿಯಂತ್ರಣಕ್ಕೆ ತರಲು ತೀವ್ರ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಫ್ರಾನ್ಸ್‌ನಲ್ಲಿ

ಸುಮಾರು ೨ ಲಕ್ಷ ೨೦ ಸಾವಿರ ಜನರನ್ನು ಸ್ಥಳಾಂತರಿಸಲಾಗಿದ್ದು, ಕಾಡ್ಗಿಚ್ಚು, ಬೋರ್ಡೋದ ಹೊರವಲಯದತ್ತ ವೇಗವಾಗಿ ಹರಡುತ್ತಿದೆ. ಅಟ್ಲಾಂಟಿಕ್ ಕರಾವಳಿಯ ಕ್ಯಾಪ್ ಫೆರೆಟ್ ಪರ್ಯಾಯ ದ್ವೀಪದಲ್ಲಿ ಭಾರೀ ಹಾನಿ ಉಂಟಾಗಿದ್ದು, ಬೋರ್ಡೋ ನಗರದಿಂದ ಸುಮಾರು ೧೫ ಕಿಲೋಮೀಟರ್ ದೂರದವರೆಗೆ ಬೆಂಕಿ ವ್ಯಾಪಿಸಿದೆ. ಮುಂಜಾಗ್ರತಾ ಕ್ರಮವಾಗಿ ಮಾರ್ಷೆಪ್ರೈಮ್ ಮತ್ತು ಸೆಸ್ಟಾಸ್ ಪಟ್ಟಣಗಳ ನಿವಾಸಿಗಳನ್ನು ಪೊಲೀಸರು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿದ್ದಾರೆ. ನೆರೆಯ ಸ್ಪೇನ್‌ನಲ್ಲಿ ೭೫ ಸಾವಿರಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದ್ದು, ಇನ್ನೂ ೩೦ ಸಾವಿರ ಜನರಿಗೆ ಮನೆಗಳಲ್ಲೇ ಇರುವಂತೆ ಸೂಚಿಸಲಾಗಿದೆ. ಸ್ಪೇನ್ ಪ್ರಧಾನಿ ಪೆಡ್ರೊ ಸಾಂಚೆಸ್ ಅವರು, ಕಾಡ್ಗಿಚ್ಚಿನಿಂದ ತೀವ್ರ ಹಾನಿಗೊಳಗಾದ ಅವಿಲಾ ಪ್ರಾಂತ್ಯಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಮ್ಯಾಡ್ರಿಡ್, ಟೊಲೆಡೊ ಸೇರಿದಂತೆ ಮೂರು ಪ್ರಾಂತ್ಯಗಳಲ್ಲಿ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಿಯಂತ್ರಣಕ್ಕೆ ತರಲು ಕಾರ್ಯಾಚರಣೆ ಮುಂದುವರಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>